ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ನಿಧನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 06/02/2020

## ಮಾಜಿ ಎಂಎಲ್ಸಿ ಜಿ. ಮಾದಪ್ಪ ನಿಧನ

**ಶಿವಮೊಗ್ಗ:** ಸ್ವಾತಂತ್ರ್ಯಯೋಧ, ವಿಧಾನಪರಿಷತ್ ಮಾಜಿ ಸದಸ್ಯ ಜಿ. ಮಾದಪ್ಪ (90) ಬುಧವಾರ ಬೆಳಗ್ಗೆ ಮಣಿಪಾಲದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಇಬ್ಬರು ಪುತ್ರಿಯರು, ಓರ್ವ ಪುತ್ರ ಇದ್ದಾರೆ. ವೃತ್ತಿಯಿಂದ ಆಡಿಟರ್ ಆಗಿದ್ದ ಅವರು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮಾಜಿ ಸಿಎಂಗಳಾದ ದಿ.ಜೆ.ಎಚ್.ಪಟೇಲ್, ರಾಮಕೃಷ್ಣ ಹೆಗಡೆ, ಎಸ್.ಆರ್.ಬೊಮ್ಮಾಯಿ ಅವರೊಂದಿಗೆ ಒಡನಾಟ ಹೊಂದಿದ್ದರು. ಒಂದು ಅವಧಿಗೆ ಜೆಡಿಎಸ್ ಅಧ್ಯಕ್ಷರಾಗಿಯೂ ಕೆಲಸ ಮಾಡಿರುವ ಮಾದಪ್ಪ, 1990ರಲ್ಲಿ ಸ್ಥಳೀಯ ಸಂಸ್ಥೆಗಳಿಂದ ವಿಧಾನಪರಿಷತ್‌ಗೆ ಆಯ್ಕೆಯಾಗಿದ್ದರು. 1994ರಲ್ಲಿ ಶಿವಮೊಗ್ಗ ವಿಧಾನಸಭೆ ಮತ್ತು 2004ರಲ್ಲಿ ಲೋಕಸಭಾ ಚುನಾವಣೆಗೆ ಜನತಾದಳದಿಂದ ಸ್ಪರ್ಧಿಸಿ ಪರಾಭವಗೊಂಡಿದ್ದರು. ಗುರುವಾರ ಬೆಳಗ್ಗೆ 10ರವರೆಗೆ ಶಿವಮೊಗ್ಗದ ಗಾಂಧಿನಗರದಲ್ಲಿನ ಸ್ವಗೃಹದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಮಧ್ಯಾಹ್ನ 1 ಗಂಟೆಗೆ ಸ್ವಗ್ರಾಮ ಹೊನ್ನಾಳಿ ತಾಲೂಕು ಯಕ್ಕನಹಳ್ಳಿಯಲ್ಲಿ ಅಂತ್ಯಸಂಸ್ಕಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

